# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಇಂದಿರಾಗಾಂಧಿ ರಾಷ್ಟ್ರೀಯ ವೃದ್ಧಾಪ್ಯ ಯೋಜನೆಯಡಿ 80 ವರ್ಷಕ್ಕೂ ಮೇಲ್ಪಟ್ಟ ಫಲಾನುಭವಿಗಳ ಪಿಂಚಣಿ ಮೊತ್ತವನ್ನು ಹೆಚ್ಚಿಸುವ ಬಗ್ಗೆ.

**ಓದಲಾಗಿದೆ:-**
1. ಸರ್ಕಾರಿ ಆದೇಶ ಸಂಖ್ಯೆ: ಕಂಇ 147 ಎಮ್ಎಸ್‌ಟಿ 2007, ದಿ: 01.12.2007
2. ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮಂತ್ರಾಲಯ, ಭಾರತ ಸರ್ಕಾರ ಇವರ ಪತ್ರ ಸಂಖ್ಯೆ: ಎ-11015/1/2011-NSAP, ದಿ: 30.06.2011.
3. ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 761 ವೆಚ್ಚ.7/2011, ದಿ: 03.11.2011.

**ಪ್ರಸ್ತಾವನೆ:**

ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ಪತ್ರದನ್ವಯ, ಭಾರತ ಸರ್ಕಾರವು ಇಂದಿರಾಗಾಂಧಿ ರಾಷ್ಟ್ರೀಯ ವೃದ್ಧಾಪ್ಯ ವೇತನದಡಿ 80 ವರ್ಷ ಮತ್ತು ಅದಕ್ಕೂ ಮೇಲ್ಪಟ್ಟ 1.38 ಲಕ್ಷ ಫಲಾನುಭವಿಗಳಿಗೆ ಮಾಹೆಯಾನ 500 ರೂ. (ಐದು ನೂರು ಮಾತ್ರ)ಗಳ ಮಾಸಾಶನವನ್ನು ನೀಡಲು ತೀರ್ಮಾನಿಸಿದೆ. ಫಲಾನುಭವಿಗಳ ಸಂಖ್ಯೆ: 1.38 ಲಕ್ಷಗಳಿಗಿಂತ ಹೆಚ್ಚಾದ ಪಕ್ಷದಲ್ಲಿ ಅಂತಹ ಫಲಾನುಭವಿಗಳಿಗೆ ರಾಜ್ಯ ಸರ್ಕಾರದ ರೂ.500 (ಐದು ನೂರು)ಗಳ ಮಾಸಾಶನವನ್ನು ನೀಡಲು ಸರ್ಕಾರ ತೀರ್ಮಾನಿಸಿದೆ. ಈ ಹಿನ್ನಲೆಯಲ್ಲಿ ಕೆಳಕಂಡ ಆದೇಶವನ್ನು ಹೊರಡಿಸಲಾಗಿರುತ್ತದೆ.

## ಸರ್ಕಾರಿ ಆದೇಶ ಸಂಖ್ಯೆ: ಕಂಇ 147 ಎಂಎಸ್‌ಟಿ 2007, ದಿನಾಂಕ: 12.01.2012

ಇಂದಿರಾಗಾಂಧಿ ರಾಷ್ಟ್ರೀಯ ವೃದ್ಧಾಪ್ಯ ವೇತನ, ಸಂಧ್ಯಾ ಸುರಕ್ಷಾ ಯೋಜನೆ, ನಿರ್ಗತಿಕ ವಿಧವಾ ವೇತನ ಮತ್ತು ಅಂಗವಿಕಲ ವೇತನ (ಶೇ.40 ಕ್ಕಿಂತ ಹೆಚ್ಚು ಹಾಗು ಶೇ.75ಕ್ಕಿಂತ ಕಡಿಮೆ ಅಂಗವೈಕಲತೆ)ದಡಿ 80 ವರ್ಷಕ್ಕೂ ಅಧಿಕ ವಯಸ್ಸಾಗಿರುವ ಫಲಾನುಭವಿಗಳಿಗೆ ಮಾಹೆಯಾನ 500 ರೂ.ಗಳು (ಐದು ನೂರು ರೂ.ಗಳು ಮಾತ್ರ) ದಿನಾಂಕ: 01.04.2011ರಿಂದ ಪೂರ್ವಾನ್ವಯವಾಗುವಂತೆ ಪಿಂಚಣಿಯನ್ನು ಹೆಚ್ಚಿಸಲಾಗಿದೆ. ತಾಲ್ಲೂಕಿನ ತಹಸೀಲ್ದಾರರು ಇಂದಿರಾಗಾಂಧಿ ರಾಷ್ಟ್ರೀಯ ವೃದ್ಧಾಪ್ಯ ವೇತನ, ಸಂಧ್ಯಾ ಸುರಕ್ಷಾ ಯೋಜನೆ, ನಿರ್ಗತಿಕ ವಿಧವಾ ವೇತನ ಮತ್ತು ಅಂಗವಿಕಲ ವೇತನ (ಶೇ.40ಕ್ಕಿಂತ ಹೆಚ್ಚು ಹಾಗು ಶೇ.75ಕ್ಕಿಂತ ಕಡಿಮೆ ಅಂಗವೈಕಲತೆ) ಯೋಜನೆಯಡಿ 80 ವರ್ಷಕ್ಕೂ ಅಧಿಕ ವಯಸ್ಸಾಗಿರುವ ಫಲಾನುಭವಿಗಳಿಗೆ ಅನುಬಂಧ-1ರಲ್ಲಿ ತಿಳಿಸಿರುವ ಮಾರ್ಗಸೂಚಿಯಂತೆ 500 ರೂ. (ಐದು ನೂರು ರೂ.ಗಳು ಮಾತ್ರ) ಮಾಸಾಶನವನ್ನು ಮಂಜೂರು ಮಾಡಲು ಆದೇಶಿಸಲಾಗಿದೆ.

ಅನುಬಂಧ-2 ರಲ್ಲಿ ಪ್ರತಿ ತಾಲ್ಲೂಕಿಗೆ ನಿಗದಿಪಡಿಸಿರುವಂತೆ 80 ವರ್ಷಕ್ಕೂ ಮೇಲ್ಪಟ್ಟ ಫಲಾನುಭವಿಗಳ ಸಂಖ್ಯೆಯನ್ನು ಸೀಮಿತಗೊಳಿಸತಕ್ಕದ್ದು.

**ಫಲಾನುಭವಿಗಳನ್ನು ಗುರುತಿಸುವ ಇನ್ನುಳಿದ ಅರ್ಹತೆಯ ಮಾನದಂಡಗಳಲ್ಲಿ ಯಾವುದೇ ಬದಲಾವಣೆಗಳಿರುವುದಿಲ್ಲ.**

(ಅಶೋಕ್ ಕುಮಾರ್ ಸಿ. ಮನೋಲಿ)
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಕಂದಾಯ ಇಲಾಖೆ.

**ಇವರಿಗೆ:**

1. ಮಹಾಲೇಖಪಾಲರು (ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
3. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಗಳು, ವಿಧಾನಸೌಧ.
4. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು
5. ಸರ್ಕಾರದ ಕಾರ್ಯದರ್ಶಿಗಳು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ.

6. ಎಲ್ಲಾ ಪ್ರಾದೇಶಿಕ ಆಯುಕ್ತರುಗಳು.
7. ಎಲ್ಲಾ ಜಿಲ್ಲಾಧಿಕಾರಿಗಳು.
8. ನಿರ್ದೇಶಕರು. ಖಜಾನೆ ಇಲಾಖೆ, ಬೆಂಗಳೂರು.
9. ಎಲ್ಲಾ ಉಪ ವಿಭಾಗಧಿಕಾರಿಗಳು/ ಎಲ್ಲಾ ತಹಸೀಲ್ದಾರರುಗಳಿಗೆ.
10. ಎಲ್ಲಾ ಜಿಲ್ಲಾ ಖಜಾನೆ ಹಾಗೂ ಉಪ ಖಜಾನೆ ಅಧಿಕಾರಿಗಳು.
11. ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು.
12. ಹೆಚ್ಚುವರಿ ಪ್ರತಿ ಮತ್ತು ಶಾಖಾ ರಕ್ಷಾ ಕಡತ.